**ಸಾಕ್ಷಿಗೆ ದಿನಾಂಕಃ 09.04.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.BSB ರವರಿಂದಃ**

1) ನಾನು ಈ ಪ್ರಕರಣದಲ್ಲಿ ಸಾಕ್ಷಿದಾರನಾಗಿದ್ದೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) ನ್ಯಾಯಾಲಯವು ಕಳುಹಿಸಿದ್ದ ಸಮನ್ಸ್ ನಲ್ಲಿ ನಮೂದು ಮಾಡಿದ್ದಂತಹ ದಾಖಲೆಗಳನ್ನು ನಾನು ಈ ದಿನ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದೇನೆ.

3) ಅನುಮತಿ ಪತ್ರವನ್ನು **ನಿ.ಪಿ.19** ಎಂದು ಗುರುತಿಸಿದೆ.

4) ಓರ್ವ ನಾಗರಾಜು ಎಂಬ ವ್ಯಕ್ತಿಯು ನಮ್ಮ ಶ್ರೀನಿವಾಸ ಆಸ್ಪತ್ರೆಗೆ ಯಾವಾಗ ದಾಖಲು ಆಗಿದ್ದಾರೆ ಮತ್ತು ಆತನಿಗೆ ಯಾವ ರೀತಿಯ ಗಾಯಗಳು ಆಗಿದ್ದವು ಮತ್ತು ಆತನಿಗೆ ಯಾವ ರೀತಿಯ ಚಿಕಿತ್ಸೆಯನ್ನು ಕೊಡಲಾಗಿದೆ ಎಂಬ ಎಲ್ಲಾ ಮಾಹಿತಿಗಳನ್ನು ಒಳಗೊಂಡಿರುವಂತಹ ಒಂದು ಕಡತ **(ಫೈಲ್)** ಅನ್ನು

ಹಾಜರುಪಡಿಸಿದ್ದು ಅದನ್ನು ನಿ.ಪಿ.**20** ಎಂದು ಗುರುತಿಸಿದೆ.

5) ಸದರಿ ನಾಗರಾಜು ರವರಿಗೆ ಸಂಬಂಧಿಸಿದಂತಹ ಒಟ್ಟು **5 X-ray films** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**21** ಎಂದು ಗುರುತಿಸಿದೆ.

6) ಶ್ರೀನಿವಾಸ ಆಸ್ಪತ್ರೆಯಲ್ಲಿ ಇಟ್ಟಿರುವಂತಹ **Medico Legal Case Register** ಅನ್ನು ಮತ್ತು ಸದರಿ ರಿಜಿಸ್ಟರ್ ನಲ್ಲಿ ದಿಃ **07.07.2025** ರಂದು ಓರ್ವ ನಾಗರಾಜು ಎಂಬ ರೋಗಿಗೆ ಸಂಬಂಧಿಸಿದಂತಹ ಮಾಹಿತಿಗಳನ್ನು ಬರೆದಿರುವಂತಹ ಹಾಳೆಯ ಯಥಾ ನಕಲನ್ನು ಈ ಸಾಕ್ಷಿದಾರರು ಹಾಜರುಪಡಿಸಿದ್ದಾರೆ. ಸದರಿ ಮೂಲ ದಾಖಲೆಯನ್ನು ಮತ್ತು ನಕಲನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಪ್ರತಿಯನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ನಕಲನ್ನು ನಿ.ಪಿ.**22** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

**<u>ಪಾಟೀ ಸವಾಲು: ಎದುರುದಾರರ ಪರ ವಕೀಲರಿಂದಃ</u>**

1 ನೇ ಎದುರುದಾರರು ಮತ್ತು ಅವರ ಪರ ವಕೀಲರು ಹಾಜರಿಲ್ಲ ಮತ್ತು ಯಾವುದೇ ಲಿಖಿತ ಹೇಳಿಕೆಯನ್ನು ಸಲ್ಲಿಸಿಲ್ಲ. ಆದ ಕಾರಣದಿಂದ ಯಾವುದೇ ಪಾಟೀ

ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಪಾಟೀ ಸವಾಲು: 2 ನೇ ಎದುರುದಾರರ ಪರ ವಕೀಲರಿಂದಃ</u>**

2 ನೇ ಎದುರುದಾರರು ಮತ್ತು ಅವರ ಪರ ವಕೀಲರು ಹಾಜರಿಲ್ಲ. ಆದ ಕಾರಣದಿಂದ ಯಾವುದೇ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.